Akashvani : Bangalore
Regional Bulletin In Kannada
19.05.2026 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಸಾರಿಗೆ ನೌಕರರು ಮುಷ್ಕರ ನಡೆಸದಂತೆ ಹೈಕೋರ್ಟ್ ಸೂಚನೆ; ಸಮಸ್ಯೆ ಬಗೆಹರಿಸುವಂತೆ ಸರ್ಕಾರಕ್ಕೆ ಸಲಹೆ
- ತುಮಕೂರಿನಲ್ಲಿ ಸರ್ಕಾರದ ಸಾಧನಾ ಸಮಾವೇಶ; ಒಂದೂವರೆ ಲಕ್ಷ ಫಲಾನುಭವಿಗಳಿಗೆ ಹಕ್ಕುಪತ್ರ ವಿತರಣೆ
- ಭ್ರಷ್ಟಾಚಾರ, ಹಣಕಾಸು ದುರಪಯೋಗವೇ ಸರ್ಕಾರದ ಸಾಧನೆ - ಬಿಜೆಪಿ ವ್ಯಂಗ್ಯ
- ಬೀದಿನಾಯಿಗಳ ಸ್ಥಳಾಂತರ ಆದೇಶ ಹಿಂಪಡೆಯುವುದಿಲ್ಲ -ಸುಪ್ರೀಂಕೋರ್ಟ್ ಸ್ಪಷ್ಟನೆ
- ದುಬಾರೆಯಲ್ಲಿ ಕಾದಾಟದ ವೇಳೆ ಗಾಯಗೊಂಡಿದ್ದ ಮಾರ್ತಾಂಡ ಆನೆ ಸಾವು; ಎರಡು ದಿನ ಪ್ರವಾಸಿಗರಿಗೆ ನಿಷೇಧ

<><*<><>*><>

ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ, ಸಾರಿಗೆ ಸಂಘಟನೆಗಳು ನಾಳೆ ಕರೆ ನೀಡಿರುವ ಮುಷ್ಕರವನ್ನು ಹೈಕೋರ್ಟ್ ತಡೆಹಿಡಿದಿದೆ. ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸೂರಜ್ ಗೋವಿಂದ ರಾಜ್ ಮತ್ತು ನ್ಯಾಯಮೂರ್ತಿ ಕೆ.ಮನ್ಮಥರಾವ್ ಅವರನ್ನೊಳಗೊಂಡ ವಿಭಾಗೀಯ ಪೀಠವು ಸಾರಿಗೆ ನೌಕರರಿಗೆ ಮುಷ್ಕರ ನಡೆಸದಂತೆ ಸೂಚಿಸಿದೆ. ಇದು ಪ್ರತಿಭಟನೆಗೆ ಕರೆ ನೀಡಿದ್ದ ಸಂಘಟನೆಗಳಿಗೆ ಹಿನ್ನಡೆಯನ್ನುಂಟುಮಾಡಿದೆ. ರಾಜ್ಯ ಸರ್ಕಾರ ಮತ್ತು ಸಾರಿಗೆ ಸಂಘಟನೆಗಳಿಗೆ ಹೈಕೋರ್ಟ್ ನೋಟಿಸ್ ಜಾರಿ ಮಾಡಿದ್ದು, ಸಾರಿಗೆ ಸಚಿವರೊಂದಿಗೆ ಸಭೆ ಕರೆಯುವಂತೆ ಸೂಚಿಸಿದೆ. ಸಾರಿಗೆ ಸಂಘಟನೆಗಳು ಮುಷ್ಕರವನ್ನು ಮುಂದುವರಿಸದಂತೆ ನಿರ್ದೇಶನ ನೀಡಿದ ನ್ಯಾಯಾಲಯ, ಸಮಸ್ಯೆಗಳನ್ನು ಸೌಹಾರ್ದಯುತವಾಗಿ ಪರಿಹರಿಸಲು ಒಕ್ಕೂಟಗಳೊಂದಿಗೆ ಚರ್ಚೆ ನಡೆಸುವಂತೆ ಸರ್ಕಾರಕ್ಕೆ ಸಲಹೆ ನೀಡಿದೆ.

<><*<><>*><>

ತುಮಕೂರಿನಲ್ಲಿ ಇಂದು ರಾಜ್ಯ ಸರ್ಕಾರ ಮೂರು ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಸಾಧನಾ ಸಮರ್ಪಣಾ ಸಮಾವೇಶ ನಡೆಯಿತು. ಸಮಾವೇಶದಲ್ಲಿ ಒಂದು ಲಕ್ಷದ ೫೨ ಸಾವಿರ ಫಲಾನುಭವಿಗಳಿಗೆ ಹಕ್ಕುಪತ್ರ ವಿತರಣೆ ಮಾಡಲಾಯಿತು. ಈ ನಡುವೆ ತುಮಕೂರು ಜಿಲ್ಲೆಯು ೨೧ ಸಾವಿರದ ೫೨೯ ಹಕ್ಕುಪತ್ರಗಳನ್ನು ಯಶಸ್ವಿಯಾಗಿ ಅಪ್‌ಲೋಡ್ ಮಾಡುವ ಮೂಲಕ

ಗಿನ್ನಿಸ್ ವಿಶ್ವದಾಖಲೆಯಲ್ಲಿ ನೋಂದಾಯಿತವಾಗಿದೆ. ಈ ಸಾಧನೆಗಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಾಧನಾ ಸಮಾವೇಶದಲ್ಲಿ ಗಿನ್ನಿಸ್ ವರ್ಲ್ಡ್ ರೆಕಾರ್ಡ್ಸ್‌ನ ಪ್ರತಿನಿಧಿಗಳು ಪ್ರಮಾಣಪತ್ರ ಹಸ್ತಾಂತರಿಸಿದರು. ಬಳಿಕ ಮುಖ್ಯಮಂತ್ರಿಗಳು ಪ್ರಮಾಣಪತ್ರವನ್ನು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರಿಗೆ ಹಸ್ತಾಂತರಿಸಿದರು. ಸಮಾವೇಶ ಉದ್ದೇಶಿಸಿ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ತುಮಕೂರನ್ನು ಎರಡನೇ ಬೆಂಗಳೂರು ಆಗಿ ರೂಪಿಸುವ ನಿಟ್ಟಿನಲ್ಲಿ ಸಹಕಾರ ನೀಡುವುದಾಗಿ ತಿಳಿಸಿದರು. ಬೆಂಗಳೂರು ನಗರದಟ್ಟಣೆ ಕಡಿಮೆ ಮಾಡಲು ಇರುವ ಏಕೈಕ ಮಾರ್ಗ ತುಮಕೂರು ಅಭಿವೃದ್ಧಿಪಡಿಸುವುದು ಎಂದು ಹೇಳಿದರು. ರಾಜ್ಯದ ಗ್ಯಾರಂಟಿ ಯೋಜನೆಗಳು, ಜನರಲ್ಲಿ ಆರ್ಥಿಕ ಶಕ್ತಿ ಉತ್ತಮಪಡಿಸಿರುವ ಬಗ್ಗೆ ಆಕ್ಸ್‌ಫರ್ಡ್ ವಿಶ್ವವಿದ್ಯಾಲಯದ ಅಧ್ಯಯನದಲ್ಲಿ ಬಯಲಾಗಿದೆ ಎಂದು ತಿಳಿಸಿದರು. ತುಮಕೂರಿಗೆ ಜೂನ್, ಜುಲೈ ವೇಳೆಗೆ ಎತ್ತಿನ ಹೊಳೆ ನೀರು ಹರಿಯಲಿದೆ ಎಂದು ಉಪಮುಖ್ಯಮಂತ್ರಿ ಸ್ಪಷ್ಟಪಡಿಸಿದರು.

<><*<><>*><>

ಸರ್ಕಾರದ ಸಾಧನಾ ಸಮಾವೇಶವನ್ನು ಬಿಜೆಪಿ ಟೀಕಿಸಿದೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಬಿಜೆಪಿ, ಅಭಿವೃದ್ಧಿ ಎಂಬುದು ಪೇಪರ್‌ನಲ್ಲಿ, ಜನರ ಬದುಕು ಕತ್ತಲಲ್ಲಿ ಎಂದು ವ್ಯಂಗ್ಯವಾಡಿದೆ. ಬಿಜೆಪಿ ಹಿರಿಯ ನಾಯಕ ಆರ್.ಅಶೋಕ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದು, ಭ್ರಷ್ಟಾಚಾರ, ಹಣಕಾಸು ದುರುಪಯೋಗ ಮತ್ತು ಆಡಳಿತ ವೈಫಲ್ಯ ಸರ್ಕಾರದ ಸಾಧನೆ ಎಂದು ಆರೋಪಿಸಿದ್ದಾರೆ. ಸರ್ಕಾರ ರಾಜ್ಯವನ್ನು ತೀವ್ರ ಆರ್ಥಿಕ ಸಂಕಷ್ಟಕ್ಕೆ ತಳ್ಳಿದೆ ಎಂದು ಅವರು ದೂರಿದ್ದಾರೆ. ರಾಜ್ಯದ ವಿದ್ಯುತ್ ಸರಬರಾಜು ಕಂಪನಿಗಳು ೪೨ ಸಾವಿರದ ೭೫೦ ಕೋಟಿ ರೂಪಾಯಿ ಸಾಲದಿಂದ ಬಳಲುತ್ತಿದೆ. ರೈತರ ಸಮಸ್ಯೆಗಳ ಕುರಿತು ಕಬ್ಬು ಮತ್ತು ಮೆಕ್ಕೆಜೋಳ ಬೆಳೆಗಾರರ ಪ್ರತಿಭಟನೆಗಳಿಗೆ ಸ್ಪಂದಿಸಲು ಸರ್ಕಾರ ವಿಫಲವಾಗಿದೆ ಎಂದು ತಿಳಿಸಿದ್ದಾರೆ.

<><*<><>*><>

ಬೀದಿನಾಯಿಗಳ ನಿಯಂತ್ರಣಕ್ಕೆ ಹಾಗೂ ಅವುಗಳನ್ನು ಆಶ್ರಯ ತಾಣಗಳಿಗೆ ಸ್ಥಳಾಂತರಿಸಲು ಆದೇಶಿಸಿದ್ದ ತನ್ನ ಆದೇಶವನ್ನು ಹಿಂಪಡೆಯುವುದಿಲ್ಲ ಎಂದು ಸುಪ್ರೀಂಕೋರ್ಟ್ ಸ್ಪಷ್ಟಪಡಿಸಿದೆ. ಈ ಮೂಲಕ ತನ್ನ ಹಿಂದಿನ ಆದೇಶವನ್ನು ತಿದ್ದುಪಡಿ ಮಾಡಬೇಕು ಎಂದು ಸಲ್ಲಿಸಿದ್ದ ಅರ್ಜಿಗಳನ್ನು ನ್ಯಾಯಮೂರ್ತಿ ವಿಕ್ರಮ್‌ನಾಥ್ ನೇತೃತ್ವದ ಪೀಠ ವಜಾಗೊಳಿಸಿದೆ. ಅಂತಹ ನಾಯಿಗಳನ್ನು ಆಶ್ರಯ ತಾಣಗಳಿಗೆ ಸೀಮಿತಗೊಳಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದೆ. ಸಾರ್ವಜನಿಕ ಸ್ಥಳಗಳಲ್ಲಿ ಬೀದಿನಾಯಿಗಳು ಇರುವುದು ಆತಂಕಕಾರಿ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ. ಜನರು ಹಾಗೂ ವಿಶೇಷವಾಗಿ ಮಕ್ಕಳ ಮೇಲೆ ಬೀದಿನಾಯಿ ದಾಳಿ ಮಾಡಿದ ಪ್ರಕರಣಗಳನ್ನು ನಿರ್ಲಕ್ಷಿಸಲು ಸಾಧ್ಯವಿಲ್ಲ ಎಂದು ನ್ಯಾಯಾಲಯ ಹೇಳಿದೆ. ರಾಜ್ಯಗಳು, ಕೇಂದ್ರಾಡಳಿತ

ಪ್ರದೇಶಗಳು, ಭಾರತೀಯ ಪ್ರಾಣಿ ಕಲ್ಯಾಣ ಮಂಡಳಿ ನಿಯಮಗಳನ್ನು ಜಾರಿಗೊಳಿಸಬೇಕು. ಪ್ರತಿ ಜಿಲ್ಲೆಯಲ್ಲಿ ಕನಿಷ್ಠ ಒಂದು ಪ್ರಾಣಿ ಜನನ ನಿಯಂತ್ರಣ ವ್ಯವಸ್ಥೆ ಸ್ಥಾಪಿಸಬೇಕು ಎಂದು ಸರ್ಕಾರಕ್ಕೆ ನಿರ್ದೇಶನ ನೀಡಿದೆ.

<><*<><>*><>

ಕೆನಡಾ ದೇಶದ ಹೈ ಕಮೀಷನರ್ ಕ್ರಿಸ್ ಕೂಟರ್ ನೇತೃತ್ವದ ನಿಯೋಗ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಶಿಕ್ಷಣ, ತಂತ್ರಜ್ಞಾನ, ಏರೋಸ್ಪೇಸ್ ಕ್ಷೇತ್ರಗಳಲ್ಲಿ ಉಭಯ ದೇಶಗಳ ಬಾಂಧವ್ಯ ವೃದ್ಧಿ ಕುರಿತು ಮಾತುಕತೆ ನಡೆಸಿತು. ಬಳಿಕ ಮಾತನಾಡಿದ ಕ್ರಿಸ್ ಕೂಟರ್ ರಾಜ್ಯದಲ್ಲಿ ಹೆಚ್ಚಿನ ಹೂಡಿಕೆ ಮಾಡಲು ಕೆನಡಾ ಉತ್ಸುಕವಾಗಿರುವುದಾಗಿ ತಿಳಿಸಿದ್ದಾರೆ. ಸಚಿವರಾದ ಎಂ.ಬಿ.ಪಾಟೀಲ್, ಶರಣ ಪ್ರಕಾಶ್ ಪಾಟೀಲ್, ಪ್ರಿಯಾಂಕ್ ಖರ್ಗೆ, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ ಶಾಲಿನಿ ರಜನೀಶ್, ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರ್ವೇಜ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

<><*<><>*><>

ಕೊಡಗು ಜಿಲ್ಲೆಯ ದುಬಾರೆ ಆನೆ ಶಿಬಿರದಲ್ಲಿ ನಿನ್ನೆ ಕಂಜನ್ ಆನೆಯ ತಿವಿತಕ್ಕೆ ಒಳಗಾಗಿದ್ದ ಸಾಕಾನೆ ಮಾರ್ತಾಂಡ ಇಂದು ಸಾವನ್ನಪ್ಪಿದೆ. ದುಬಾರೆಯ ಕಾವೇರಿ ನದಿಯಲ್ಲಿ ಸ್ನಾನಕ್ಕೆ ತೆರಳಿದ್ದ ಸಂದರ್ಭದಲ್ಲಿ  ಕಂಜನ್ ಹೆಸರಿನ ಸಾಕಾನೆಯೊಂದು ದಿಡೀರ್ ದಾಳಿ ನಡೆಸಿದ ಹಿನ್ನಲೆಯಲ್ಲಿ ೩೪ ವರ್ಷದ ಮಾರ್ತಾಂಡನಿಗೆ ಗಂಭೀರ ಗಾಯಗಳಾಗಿತ್ತು. ಚಿಕಿತ್ಸೆ ಫಲಕಾರಿಯಾಗದೆ  ಇಂದು ಮಾರ್ತಾಂಡ ಆನೆ ಕೊನೆಯುಸಿರೆಳೆದಿದೆ.  ಮಾರ್ತಾಂಡ ಮತ್ತು ಕಂಜನ್ ಎಂಬ ಎರಡು ಸಾಕಾನೆಗಳ ನಡುವೆ ಸಂಭವಿಸಿದ್ದ ಸಂಘರ್ಷದಲ್ಲಿ ಆನೆಯ ಕೆಳಗಡೆ ಸಿಲುಕಿ ಚೆನ್ನೈ ಮೂಲದ ಪ್ರವಾಸಿ ಮಹಿಳೆ ಸಾವನ್ನಪ್ಪಿದ್ದರು. ಈ ಎಲ್ಲಾ ಘಟನೆಗಳ ಹಿನ್ನಲೆಯಲ್ಲಿ ದುಬಾರೆ ಶಿಬಿರವನ್ನು ಇಂದು ಮತ್ತು ನಾಳೆ ಪ್ರವಾಸಿಗರಿಗೆ ನಿಷೇಧಿಸಿ ಅರಣ್ಯ ಇಲಾಖೆ ಆದೇಶಿಸಿದೆ.

<><*<><>*><>

ಮಳೆಗಾಲದಲ್ಲಿ ಎದುರಾಗುವ ಪ್ರಾಕೃತಿಕ ವಿಕೋಪ ತಡೆಯಲು ಜಿಲ್ಲಾಡಳಿತ ಸಕಲ ಸಿದ್ಧತೆ ನಡೆಸಿದೆ ಎಂದು ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ದರ್ಶನ್ ಎಚ್.ವಿ ತಿಳಿಸಿದ್ದಾರೆ. ಮಂಗಳೂರಿನಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಂಗಳೂರಿನ ಪಂಪ್‌ವೆಲ್ ಸೇರಿದಂತೆ ಕೃತಕ ನೆರೆ ಸಂಭವಿಸುವ ಪ್ರದೇಶಗಳ ಒಳಚರಂಡಿಗಳ ಎತ್ತರವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಐದು ಕಾಮಗಾರಿಗಳಲ್ಲಿ ಮೂರು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ಎಂದು ಹೇಳಿದ್ದಾರೆ. ರಾಷ್ಟ್ರೀಯ ಹೆದ್ದಾರಿ ೬೬, ೭೫, ಹಾಗೂ ೭೩ರಲ್ಲಿ ಅತಿಕ್ರಮಣ ತೆರವು ಕಾರ್ಯಾಚರಣೆಗೆ

ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ಮಾಹಿತಿ ಪಡೆಯಲಾಗಿದ್ದು, ಸ್ಥಳೀಯ ತಂಡಗಳ ಸಹಕಾರದೊಂದಿಗೆ ತೆರವು ಕಾರ್ಯಾಚರಣೆ ಆರಂಭಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಪರವಾನಗಿ ಪಡೆಯದೇ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವವರ ವಿರುದ್ಧ ಗರಿಷ್ಠ ಪ್ರಮಾಣದಲ್ಲಿ ದಂಡ ವಿಧಿಸುವಂತೆ ಚಾಮರಾಜನಗರ ಜಿಲ್ಲಾಧಿಕಾರಿ ಶ್ರೀರೂಪ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ನಿಯಮ ಬಾಹಿರವಾಗಿ ತಂಬಾಕು ಮಾರಾಟ ಮಾಡುವವರ ವಿರುದ್ಧ ಕ್ರಮ ಜರುಗಿಸಬೇಕು. ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವವರು ಪ್ರತ್ಯೇಕ ಪರವಾನಗಿ ಹೊಂದಿರಬೇಕು ಎಂದು ತಿಳಿಸಿದ್ದಾರೆ. ನಗರ, ಗ್ರಾಮೀಣ ಪ್ರದೇಶಗಳ ಶಾಲಾ, ಶೈಕ್ಷಣಿಕ ಸಂಸ್ಥೆಗಳ ಆವರಣದ ೧೦೦ಮೀಟರ್ ಅಂತರದಲ್ಲಿ ತಂಬಾಕು ಉತ್ಪನ್ನಗಳ ಮಾರಾಟಕ್ಕೆ ಅವಕಾಶವಿರುವುದಿಲ್ಲ ಎಂದು ಹೇಳಿದ್ದಾರೆ.

<><*<><>*><>

ಮಾದಕ ವಸ್ತುಗಳ ಸೇವನೆ ಸಮಾಜಕ್ಕೆ ಮಾರಕವಾಗಿದ್ದು, ಮೈಸೂರಿನಲ್ಲಿ ಮಾರಾಟ ಮತ್ತು ಸೇವನೆಯನ್ನು ತಡೆಗಟ್ಟಲು ಜಾಗೃತಿ ಕಾರ್ಯಕ್ರಮ ಕೈಗೊಳ್ಳುವಂತೆ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿ.ಮಲ್ಲಿಕ್ ತಿಳಿಸಿದ್ದಾರೆ. ಜೂನ್ ೨೬ ರಂದು ಮಾದಕ ವಸ್ತು ವಿರೋಧಿ ದಿನಾಚರಣೆ ಆಚರಿಸಲಾಗುತ್ತಿದ್ದು, ಕಾಲೇಜು ವಿದ್ಯಾರ್ಥಿಗಳನ್ನು ತೊಡಗಿಸಿಕೊಂಡು ಅರಿವು ಕಾರ್ಯಕ್ರಮವನ್ನು ಹಮ್ಮಿಕೊಳ್ಳುವಂತೆ ತಿಳಿಸಿದ್ದಾರೆ. ಹಾಸ್ಟೆಲ್‌ಗಳಲ್ಲಿ ಸಿ.ಸಿ.ಟಿ.ವಿ ಅಳವಡಿಸಿ ವಿದ್ಯಾರ್ಥಿಗಳ ಕಾರ್ಯಚಟುವಟಿಕೆಗಳ ನಿಗಾವಹಿಸುವಂತೆ ನಿರ್ದೇಶನ ನೀಡಿದ್ದಾರೆ.

<><*<><>*><>

ಮಳೆಗಾಲ ಪ್ರಾರಂಭವಾಗುವ ಮುನ್ನ ಕುಡಿಯುವ ನೀರಿನ ಮೂಲಗಳು ಮತ್ತು ನೀರಿನ ಮಾದರಿಗಳನ್ನು ಪರೀಕ್ಷಿಸಿ, ನೀರು ಕಲುಷಿತಗೊಳ್ಳದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಉತ್ತರಕನ್ನಡ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲೀಷ್ ಶಶಿ ಸೂಚನೆ ನೀಡಿದ್ದಾರೆ. ಜಿಲ್ಲೆಯ ಎಲ್ಲಾ ಶಾಲೆ, ಅಂಗನವಾಡಿ ಮತ್ತು ವಸತಿ ನಿಲಯಗಳಿಗೆ ಶುದ್ಧ ಕುಡಿಯುವ ನೀರು ಸರಬರಾಜು ಮಾಡುವಲ್ಲಿ ವ್ಯತ್ಯಯವಾಗದಂತೆ ಎಚ್ಚರ ವಹಿಸುವಂತೆ ನಿರ್ದೇಶನ ನೀಡಿದ್ದಾರೆ. ಜಲ ಜೀವನ್ ಮಿಷನ್ ಕಾಮಗಾರಿಗಳು ಪೂರ್ಣಗೊಂಡಿರುವ ಕಡೆ ಹೆಸ್ಕಾಂ ವತಿಯಿಂದ ಶೀಘ್ರವೇ ವಿದ್ಯುತ್ ಸಂಪರ್ಕ ಕಲ್ಪಿಸಬೇಕು ಎಂದು ತಿಳಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>